ಅಧ್ಯಕ್ಷರು:- ಅನುಬಂಧ 3. ವಿಧೇಯಕವನ್ನು ಮಂಡಿಸಲಾಗಿದೆ ಅನುಬಂಧ 3.

(ii) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2003.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೆ "2003ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ "2003ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೇ "2003ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು:- ಅನುಬಂಧ 4. ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 4.

(iii) ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2003.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ, "2003ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ."

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ "2003ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ "2003ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ಅನುಬಂಧ 5. ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ 5.

(iv) ಕರ್ನಾಟಕ ಸ್ಟಾಂಪ್ (ತಿದ್ದುಪಡಿ) ವಿಧೇಯಕ, 2003.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):- ಮಾನ್ಯ ಅಧ್ಯಕ್ಷರೇ "2003ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ "2003ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."